ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಸರ್ಕಾರಿ ಜಿಲ್ಲಾ/ತಾಲ್ಲೂಕು ಆಸ್ಪತ್ರೆಗಳ ಅವ್ಯವಹಾರದ ಬಗ್ಗೆ

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):-

995 (1230) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಜಿಲ್ಲಾ/ತಾಲ್ಲೂಕು ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಕೆಲವೊಂದು ಪರೀಕ್ಷೆಗಳನ್ನು ಮಾಡುವಲ್ಲಿ ಖಾಸಗಿ ಲ್ಯಾಬ್‌ಗಳಿಗೆ ಶಿಫಾರಸ್ಸು ಮಾಡುವುದು ಹಾಗೂ ಹೊರಗಿನ ಔಷಧಿ ಮಳಿಗೆಗಳಿಂದ ಔಷಧಿ ಕೊಂಡುಕೊಳ್ಳುವಂತೆ ಸೂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಇದರಿಂದಾಗಿ ಜನಸಾಮಾನ್ಯರಿಗೆ ತೊಂದರೆಯಾಗುತ್ತಿದ್ದು, ಇದನ್ನು ನಿವಾರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ? (ವಿವರ ನೀಡುವುದು)